ಕರ್ನಾಟಕ ಸರ್ಕಾರ
ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ,–590001
OFFICE OF THE DEPUTY COMMISSIONER, BELAGAVI DISTRICT, BELAGAVI -590001
ದೂರವಾಣಿ : 0831- 2407200, 2407273 Email: deo.belagavi@gmail.com:

ಸಂ:ಎಂ.ಎ.ಜಿ/ಪಿಓಎಲ್/ವಿವ-32/2024-25 ದಿನಾಂಕ:20-01-2025

**ವಿಷಯ:** ದಿನಾಂಕ:21-01-2025 ರಂದು ಬೆಳಗಾವಿ ಸುವರ್ಣ ವಿಧಾನ ಸೌಧದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪುತ್ಥಳಿ ಅನಾವರಣ" ಸಮಾರಂಭ ಜರುಗುವ ಹಿನ್ನಲೆಯಲ್ಲಿ ಬೆಳಗಾವಿ ತಾಲೂಕು(ಗ್ರಾಮೀಣ & ನಗರ) ಶೈಕ್ಷಣಿಕ ವಲಯದ ಎಲ್ಲಾ ಸರಕಾರಿ ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಹಾಗೂ ಬೆಳಗಾವಿ ತಾಲೂಕಿನ ನಗರ ಯೋಜನೆ ಹಾಗೂ ಗ್ರಾಮೀಣ ಯೋಜನೆಯ ಎಲ್ಲಾ ಅಂಗನವಾಡಿಗಳಿಗೆ ರಜೆ ಘೋಷಿಸುವ ಕುರಿತು.

DISTRICT MAGISTRATE
ಜಿಲ್ಲಾ ದಂಡಾಧಿಕಾರಿಗಳು
ಬೆಳಗಾವಿ
BELAGAVI

**ಉಲ್ಲೇಖ:**
1. ಉಪನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ ಬೆಳಗಾವಿ (ದ) ಇವರ ಪತ್ರಸಂಖ್ಯೆ :ಆ.ಶಾ/ಉನಿ ರಜೆ ಘೋಷಣೆ / 2024- 25 ದಿನಾಂಕ:20.01.2025
2. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಳಗಾವಿ ರವರ ಪತ್ರ ಸಂಖ್ಯೆ: / ಉನಿ / ರ.ಘೋ/39/27 ದಿನಾಂಕ:20.01.2025.
3. ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ (ಬಿ.ಎನ್.ಎಸ್.ಎಸ್) 2023 ರ ಕಲಂ 163 ರ ಪ್ರಕಾರ.

*******

**ಪ್ರಸ್ತಾವನೆ:**

ಮಹಾತ್ಮ ಗಾಂಧೀಜಿಯವರು 1924ನೇ ಸಾಲಿನ ಸ್ವಾತಂತ್ರ್ಯ ಸಂಗ್ರಾಮದ ಐತಿಹಾಸಿಕ ಬೆಳಗಾವಿ ಕಾಂಗ್ರೆಸ್ ಅಧಿವೇಶನದಲ್ಲಿ ಅಧ್ಯಕ್ಷತೆ ವಹಿಸಿರುವ ಶತಮಾನೋತ್ಸವದ ಅಂಗವಾಗಿ ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಕರ್ನಾಟಕ ಸರ್ಕಾರ ಹಾಗೂ ಜಿಲ್ಲಾಡಳಿತ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ದಿನಾಂಕ:21-01-2025 ರಂದು ಬೆಳಿಗ್ಗೆ 10.30 ಗಂಟೆಗೆ "ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪುತ್ಥಳಿ ಅನಾವರಣ" ಸಮಾರಂಭವನ್ನು ಆಯೋಜಿಸಲಾಗಿರುತ್ತದೆ. ಪ್ರಯುಕ್ತ ಸದರಿ ಕಾರ್ಯಕ್ರಮಗಳಲ್ಲಿ ಗಣ್ಯ ಮಾನ್ಯರು, ಸ್ವಾತಂತ್ರ್ಯ ಹೋರಾಟಗಾರರು, ಸಾರ್ವಜನಿಕರು, ಮಹಿಳೆಯರು ಹಾಗೂ ವೃದ್ಧರು ಹೀಗೆ ಲಕ್ಷಾಂತರ ಜನ ಭಾಗವಹಿಸುವ ಸಂಭವವಿರುತ್ತದೆ. ಅಲ್ಲದೇ ವಾಹನ ಸಂಚಾರ ದಟ್ಟಣೆ ಹೆಚ್ಚಾಗುವ ಸಂಭವವಿರುವ ಕಾರಣ ಶಾಲಾಮಕ್ಕಳ ಸುರಕ್ಷತಾ ಹಿತದೃಷ್ಟಿಯಿಂದ ಮುಂಜಾಗೃತಾ ಕ್ರಮವಾಗಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ (ಬಿ.ಎನ್.ಎಸ್.ಎಸ್) 2023 ರ ಕಲಂ 163 ರಡಿಯಲ್ಲಿ ಬೆಳಗಾವಿ ತಾಲೂಕು ಶೈಕ್ಷಣಿಕ ವಲಯ (ಗ್ರಾಮೀಣ & ನಗರ) ದ ಎಲ್ಲಾ ಸರಕಾರಿ ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಹಾಗೂ ಬೆಳಗಾವಿ ತಾಲೂಕಿನ ನಗರ ಯೋಜನೆ ಹಾಗೂ ಗ್ರಾಮೀಣ ಯೋಜನೆಯ ಎಲ್ಲಾ ಅಂಗನವಾಡಿಗಳಿಗೆ ದಿನಾಂಕ:21.01.2025 ರಂದು ರಜೆ ಘೋಷಿಸುವುದು ಅವಶ್ಯವಿರುವುದರಿಂದ ಈ ಕೆಳಗಿನಂತೆ.

## ಆದೇಶ

ಈ ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ **ಬೆಳಗಾವಿ ಜಿಲ್ಲೆಯ ಜಿಲ್ಲಾ ದಂಡಾಧಿಕಾರಿಯಾದ ನಾನು ಮೊಹಮ್ಮದ ರೋಷನ್ ಭಾ.ಆ.ಸೇ.,** ಮಹಾತ್ಮ ಗಾಂಧೀಜಿಯವರು 1924ನೇ ಸಾಲಿನ ಸ್ವಾತಂತ್ರ್ಯ ಸಂಗ್ರಾಮದ ಐತಿಹಾಸಿಕ ಬೆಳಗಾವಿ ಕಾಂಗ್ರೆಸ್ ಅಧಿವೇಶನದಲ್ಲಿ ಅಧ್ಯಕ್ಷತೆ ವಹಿಸಿರುವ ಶತಮಾನೋತ್ಸವದ ಅಂಗವಾಗಿ ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ದಿನಾಂಕ:21-01-2025 ರಂದು ಬೆಳಿಗ್ಗೆ 10.30 ಗಂಟೆಗೆ "ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪುತ್ಥಳಿ ಅನಾವರಣ" ಸಮಾರಂಭದ ಪ್ರಯುಕ್ತ ಸದರಿ ಕಾರ್ಯಕ್ರಮಗಳಲ್ಲಿ ಗಣ್ಯ ಮಾನ್ಯರು, ಸ್ವಾತಂತ್ರ್ಯ ಹೋರಾಟಗಾರರು, ಸಾರ್ವಜನಿಕರು, ಮಹಿಳೆಯರು ಹಾಗೂ ವೃದ್ಧರು ಹೀಗೆ ಲಕ್ಷಾಂತರ ಜನ ಭಾಗವಹಿಸುವ ಸಂಭವವಿರುತ್ತದೆ. ಅಲ್ಲದೇ ವಾಹನ ಸಂಚಾರ ದಟ್ಟಣೆ ಹೆಚ್ಚಾಗುವ ಸಂಭವವಿರುವ ಕಾರಣ **ಶಾಲಾಮಕ್ಕಳ ಸುರಕ್ಷತಾ ಹಿತದೃಷ್ಟಿಯಿಂದ ಮುಂಜಾಗೃತಾ ಕ್ರಮವಾಗಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ (ಬಿ.ಎನ್.ಎಸ್.ಎಸ್) 2023 ಕಲಂ 163 ರಡಿ ಪ್ರದತ್ತವಾದ ಅಧಿಕಾರದ ಮೇರೆಗೆ ಬೆಳಗಾವಿ ತಾಲೂಕು ಶೈಕ್ಷಣಿಕ ವಲಯ (ನಗರ & ಗ್ರಾಮೀಣ)ದ ಎಲ್ಲಾ ಸರಕಾರಿ ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಹಾಗೂ ಬೆಳಗಾವಿ ತಾಲೂಕಿನ ನಗರ ಯೋಜನೆ ಹಾಗೂ ಗ್ರಾಮೀಣ ಯೋಜನೆಯ ಎಲ್ಲಾ ಅಂಗನವಾಡಿಗಳಿಗೆ ದಿನಾಂಕ:21.01.2025 ರಂದು ರಜೆ ಘೋಷಿಸಿ ಆದೇಶಿಸಿದೆ.**

ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ ಬೆಳಗಾವಿ(ದ) ರವರು ಹಾಗೂ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಳಗಾವಿ ರವರು ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಹಾಗೂ ಈ ರಜಾ ಅವಧಿಯನ್ನು ಮುಂದಿನ ದಿನಗಳಲ್ಲಿ ಹೊಂದಾಣಿಕೆ ಮಾಡಿಕೊಳ್ಳುವುದು.

**(ಮೊಹಮ್ಮದ ರೋಷನ್ ಭಾ.ಆ.ಸೇ.)**
**ಜಿಲ್ಲಾ ದಂಡಾಧಿಕಾರಿಗಳು, ಬೆಳಗಾವಿ.**

**ಪ್ರತಿ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ :**

1. ಪೊಲೀಸ್ ಆಯುಕ್ತರು, ಬೆಳಗಾವಿ ನಗರ, ಬೆಳಗಾವಿ
2. ಪೊಲೀಸ್ ಅಧೀಕ್ಷಕರು, ಬೆಳಗಾವಿ.
3. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ, ಬೆಳಗಾವಿ.
4. ಉಪವಿಬಾಗಾಧಿಕಾರಿಗಳು, ಬೆಳಗಾವಿ
5. ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ ಬೆಳಗಾವಿ(ದ).
6. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಳಗಾವಿ
7. ಉಪನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೆಳಗಾವಿ ರವರಿಗೆ ಸರ್ಕಾರಕ್ಕೆ ವೆಚ್ಚ ಬಾರದ ರೀತಿಯಲ್ಲಿ ಸ್ಥಳೀಯ ಸುದ್ದಿ ಮಾಧ್ಯಮಗಳಲ್ಲಿ ಪ್ರಕಟಿಸುವ ಕುರಿತು.
8. ತಹಶೀಲ್ದಾರ, ಬೆಳಗಾವಿ

**ಅಪರ ಜಿಲ್ಲಾದಂಡಾಧಿಕಾರಿಗಳು**
**ಬೆಳಗಾವಿ ಜಿಲ್ಲೆ, ಬೆಳಗಾವಿ**